All India Radio: Bangalore
National Bulletin In Kannada
08.06.2026  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

- ಪಶ್ಚಿಮ ಬಂಗಾಳದಲ್ಲಿ 'ಆಯುಷ್ಮಾನ್ ಭಾರತ್' ಯೋಜನೆ ಜಾರಿ: ಇಂದು ಒಪ್ಪಂದಕ್ಕೆ ಸಹಿ
- ಚಂಡೀಗಢದಲ್ಲಿ ಇಂದು ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ; ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಉದ್ಘಾಟನೆ
- ಭಾರತದ 'ಆಕ್ಟ್ ಈಸ್ಟ್' ನೀತಿಯ ಪ್ರಮುಖ ಸ್ತಂಭ ಇಂಡೋನೇಷ್ಯಾ: ವಿದೇಶಾಂಗ ಸಚಿವಾಲಯ ಹೇಳಿಕೆ
- ಉಲಾನ್‌ಬಾತರ್ ಓಪನ್-೨೦೨೬ ಕುಸ್ತಿ ಪಂದ್ಯಾವಳಿ ; ಭಾರತಕ್ಕೆ ೮ ಚಿನ್ನ ಸೇರಿದಂತೆ ಒಟ್ಟು ೧೬ ಪದಕ
- ಫ್ರೆಂಚ್ ಓಪನ್ ಟೆನಿಸ್ ; ಚೊಚ್ಚಲ ಗ್ರ್ಯಾಂಡ್ ಸ್ಲ್ಯಾಮ್ ಪ್ರಶಸ್ತಿ ಮುಡಿಗೇರಿಸಿಕೊಂಡ ಜರ್ಮನಿಯ ಅಲೆಕ್ಸಾಂಡರ್ ಜ್ವೆರೇವ್

<><><><>

ವಿಶ್ವದ ಅತಿದೊಡ್ಡ ಸಾರ್ವಜನಿಕ ಆರೋಗ್ಯ ವಿಮಾ ಯೋಜನೆಯಾದ 'ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ'ಯನ್ನು ಜಾರಿಗೊಳಿಸಲು ಪಶ್ಚಿಮ ಬಂಗಾಳ ಸಜ್ಜಾಗಿದೆ. ಈ ಮೂಲಕ ಈ ಯೋಜನೆಯನ್ನು ಅಳವಡಿಸಿಕೊಂಡ ದೇಶದ ೩೬ನೇ ರಾಜ್ಯ ಎಂಬ ಹೆಗ್ಗಳಿಕೆಗೆ ಅದು ಪಾತ್ರವಾಗಲಿದೆ. ಯೋಜನೆಯ ಅನುಷ್ಠಾನಕ್ಕಾಗಿ ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ ಮತ್ತು ಪಶ್ಚಿಮ ಬಂಗಾಳ ಸರ್ಕಾರ ಇಂದು ನವದೆಹಲಿಯಲ್ಲಿ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಲಿವೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಹಾಗೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸುವೇಂದು ಅಧಿಕಾರಿ ಅವರ ಉಪಸ್ಥಿತಿಯಲ್ಲಿ ಈ ಒಪ್ಪಂದ ನಡೆಯಲಿದೆ.

ಈ ಮಹತ್ವದ ನಿರ್ಧಾರದಿಂದಾಗಿ ಪಶ್ಚಿಮ ಬಂಗಾಳದ ಲಕ್ಷಾಂತರ ಅರ್ಹ ಫಲಾನುಭವಿಗಳಿಗೆ ಉಚಿತ ವೈದ್ಯಕೀಯ ಸೌಲಭ್ಯ ದೊರೆಯಲಿದ್ದು, ದೇಶದಾದ್ಯಂತ ಯಾವುದೇ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವ ಸೌಲಭ್ಯವೂ ಲಭ್ಯವಾಗಲಿದೆ. ಆಯುಷ್ಮಾನ್ ಭಾರತ್ ಯೋಜನೆಯಡಿ ಅರ್ಹ ಕುಟುಂಬಗಳಿಗೆ ದ್ವಿತೀಯ ಮತ್ತು ತೃತೀಯ ಹಂತದ ಆಸ್ಪತ್ರೆ ದಾಖಲಾತಿಗಾಗಿ ವಾರ್ಷಿಕ ಪ್ರತಿ ಕುಟುಂಬಕ್ಕೆ ೫ ಲಕ್ಷ ರೂಪಾಯಿವರೆಗೆ ಉಚಿತ ಆರೋಗ್ಯ ವಿಮೆ ಒದಗಿಸಲಾಗುತ್ತದೆ. ಇದು ಸಾರ್ವಜನಿಕರ ವೈದ್ಯಕೀಯ ವೆಚ್ಚದ ಹೊರೆಯನ್ನು ಗಣನೀಯವಾಗಿ ತಗ್ಗಿಸಲಿದೆ.

<><><><>

ಕಾಮನ್‌ವೆಲ್ತ್ ಸಂಸದೀಯ ಸಂಸ್ಥೆ- ಸಿಪಿಎಯ ಭಾರತೀಯ ವಲಯ-೨ರ ಮೂರು ದಿನಗಳ ಪ್ರಾದೇಶಿಕ ಸಮ್ಮೇಳನವನ್ನು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ಇಂದು ಚಂಡೀಗಢದಲ್ಲಿ ಉದ್ಘಾಟಿಸಲಿದ್ದಾರೆ. ಹರಿಯಾಣ ವಿಧಾನಸಭೆಯು ಈ ಬಾರಿಯ ಸಮ್ಮೇಳನಕ್ಕೆ ಆತಿಥ್ಯ ವಹಿಸಿದೆ. ಈ ಕಾರ್ಯಕ್ರಮದಲ್ಲಿ ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ, ಹರಿಯಾಣ ವಿಧಾನಸಭೆಯ ಸ್ಪೀಕರ್ ಹರ್ವಿಂದರ್ ಕಲ್ಯಾಣ್ ಸೇರಿದಂತೆ ದೇಶದ ೧೫ ವಿವಿಧ ಶಾಸಕಾಂಗಗಳ ಸಭಾಪತಿಗಳು, ಉಪಸಭಾಪತಿಗಳು ಹಾಗೂ ಶಾಸಕರು ಭಾಗವಹಿಸಲಿದ್ದಾರೆ.

<><><><>

ಸಾರ್ವಜನಿಕ ಭಾಗವಹಿಸುವಿಕೆ, ನಾವೀನ್ಯತೆ, ಉದ್ಯಮಶೀಲತೆ ಮತ್ತು ಸಾಮೂಹಿಕ ಸಂಕಲ್ಪದ ಮೂಲಕ ಮಾತ್ರ ವಿಕಸಿತ ಭಾರತ-೨೦೪೭ರ ದೂರದೃಷ್ಟಿಯನ್ನು ಸಾಕಾರಗೊಳಿಸಲು ಸಾಧ್ಯ ಎಂದು ಲೋಕಸಭೆಯ ಸಭಾಧ್ಯಕ್ಷ ಓಂ ಬಿರ್ಲಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಸಮಾವೇಶವೊಂದರಲ್ಲಿ ಮಾತನಾಡಿದ ಅವರು, ದೇಶದ ಪ್ರಗತಿಯ ಪ್ರಯೋಜನಗಳು ಸಮಾಜದ ಪ್ರತಿಯೊಂದು ವರ್ಗಕ್ಕೂ ತಲುಪಬೇಕಾದರೆ ಉದ್ಯಮಶೀಲತೆ ಮತ್ತು ರಾಷ್ಟ್ರ ನಿರ್ಮಾಣದ ಕಾರ್ಯಗಳು ಜೊತೆಯಾಗಿ ಸಾಗಬೇಕು ಎಂದರು. ಭಾರತ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಹಾದಿಯಲ್ಲಿ ಒಳಗೊಳ್ಳುವಿಕೆ, ಸಾಮಾಜಿಕ ಜವಾಬ್ದಾರಿ ಮತ್ತು ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆ ಪ್ರಮುಖ ಮಾರ್ಗದರ್ಶಿಯಾಗಬೇಕು ಎಂದರು.

ಸುಶಿಕ್ಷಿತ, ಕೌಶಲ್ಯಭರಿತ ಮತ್ತು ತಂತ್ರಜ್ಞಾನ ಆಧಾರಿತ ಯುವಶಕ್ತಿಯೇ ವಿಕಸಿತ ಭಾರತದ ದೊಡ್ಡ ಶಕ್ತಿಯಾಗಿದೆ ಎಂದ ಅವರು, ಮುಂಬರುವ ಯುಗ ಜ್ಞಾನ ಮತ್ತು ನಾವೀನ್ಯತೆಯಿಂದ ಚಾಲಿತ ಯುಗವಾಗಿರಲಿದ್ದು, ಭಾರತವನ್ನು ಜಾಗತಿಕ ನಾಯಕನನ್ನಾಗಿ ಮಾಡಲು ಯುವಕರು ಕೃತಕಬುದ್ಧಿಮತ್ತೆ ಸೇರಿದಂತೆ ಉದಯೋನ್ಮುಖ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಮತ್ತು ಕೇವಲ ಉದ್ಯೋಗಾಕಾಂಕ್ಷಿಗಳಾಗದೇ ಉದ್ಯೋಗಸೃಷ್ಟಿಕರ್ತರಾಗಬೇಕು ಎಂದು ಕರೆ ನೀಡಿದರು.

<><><><>

ಭಾರತದ 'ಆಕ್ಟ್ ಈಸ್ಟ್' ನೀತಿಯಲ್ಲಿ ಇಂಡೋನೇಷ್ಯಾ ಅತ್ಯಂತ ಪ್ರಮುಖ ಸ್ತಂಭವಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಭಾರತ ಪ್ರವಾಸದಲ್ಲಿರುವ ಇಂಡೋನೇಷ್ಯಾದ ವಿದೇಶಾಂಗ ಸಚಿವ ಸುಗಿಯೋನೊ ಅವರು ನವದೆಹಲಿಯಲ್ಲಿ ನಿನ್ನೆ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರೊಂದಿಗೆ ಲನೇ ಭಾರತ-ಇಂಡೋನೇಷ್ಯಾ ಜಂಟಿ ಆಯೋಗದ ಸಭೆಯ ಜಂಟಿ ಅಧ್ಯಕ್ಷತೆ ವಹಿಸಿ ಮಾತುಕತೆ ನಡೆಸಿದ ಬೆನ್ನಲ್ಲೇ ಸಚಿವಾಲಯ ಈ ಹೇಳಿಕೆ ನೀಡಿದೆ. ಉಭಯ ದೇಶಗಳ ನಡುವಿನ ನಾಗರಿಕ ಸಂಬಂಧಗಳನ್ನು ಸ್ಮರಿಸಿದ ಸಚಿವಾಲಯವು, ಭಾರತ-ಇಂಡೋನೇಷ್ಯಾ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ಸಾಂಪ್ರದಾಯಿಕ ಹಾಗೂ ನೂತನ ವಲಯಗಳಲ್ಲಿ ಮತ್ತಷ್ಟು ಬಲಗೊಳ್ಳುತ್ತಿದೆ ಎಂದು ತಿಳಿಸಿದೆ. ಈ ಉನ್ನತ ಮಟ್ಟದ ಸಭೆಯಲ್ಲಿ ನಾಯಕರಿಬ್ಬರೂ ದ್ವಿಪಕ್ಷೀಯ ಬಾಂಧವ್ಯವನ್ನು ಪರಾಮರ್ಶಿಸಿದರು. ರಕ್ಷಣೆ-ಭದ್ರತೆ, ಸಾಗರ ಸಹಕಾರ, ವ್ಯಾಪಾರ-ಹೂಡಿಕೆ, ಫಾರ್ಮಾ ಮತ್ತು ಆರೋಗ್ಯ, ಡಿಜಿಟಲ್, ಇಂಧನ, ಸಂಪರ್ಕ, ಬಾಹ್ಯಾಕಾಶ, ಶಿಕ್ಷಣ ಹಾಗೂ ಸಾಂಸ್ಕೃತಿಕ ವಿನಿಮಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರವನ್ನು ಮತ್ತಷ್ಟು ವಿಸ್ತರಿಸುವ ಕುರಿತು ವಿಸ್ತೃತ ಚರ್ಚೆ ನಡೆಸಿದರು. ೨೦೨೫ರ ಜನವರಿಯಲ್ಲಿ ಇಂಡೋನೇಷ್ಯಾದ ಅಧ್ಯಕ್ಷ ಪ್ರಬೊವೊ ಸುಬಿಯಾಂಟೊ ಅವರು ಭಾರತಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ನಡೆಸಿದ ಮಾತುಕತೆಯು ದ್ವಿಪಕ್ಷೀಯ ಸಂಬಂಧಕ್ಕೆ ಹೊಸ ವೇಗ ನೀಡಿದೆ ಎಂದು ಸಚಿವಾಲಯ ತಿಳಿಸಿದೆ.

ಪ್ರಾದೇಶಿಕ ಹಾಗೂ ಜಾಗತಿಕ ವಿದ್ಯಮಾನಗಳ ಕುರಿತು ವಿಚಾರ ವಿನಿಮಯ ಮಾಡಿಕೊಂಡ ಉಭಯ ನಾಯಕರು, ಮುಂಬರುವ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಇಂಡೋನೇಷ್ಯಾಕ್ಕೆ ಕೈಗೊಳ್ಳಲಿರುವ ಭೇಟಿಯು ಉಭಯ ದೇಶಗಳ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

<><><><>

ಈ ತಿಂಗಳ ೨೧ ರಂದು ನಡೆಯಲಿರುವ ನೀಟ್-ಯುಜಿ ೨೦೨೪ ಮರುಪರೀಕ್ಷೆಯ ಪರೀಕ್ಷಾ ನಗರ ಮಾಹಿತಿ ಚೀಟಿಯನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ -ಎನ್‌ಟಿಎ ಬಿಡುಗಡೆ ಮಾಡಿದೆ. ಸಂಸ್ಥೆ ಹೊರಡಿಸಿದ ಸಾರ್ವಜನಿಕ ಸೂಚನೆಯ ಪ್ರಕಾರ, ಭಾರತದ ೫೫೧ ನಗರಗಳಲ್ಲಿ ಮತ್ತು ವಿದೇಶದಲ್ಲಿರುವ ೧೪ ನಗರಗಳಲ್ಲಿ ಮರುಪರೀಕ್ಷೆಯನ್ನು ಮಧ್ಯಾಹ್ನ ೨ ರಿಂದ ಸಂಜೆ ೫:೧೫ ರವರೆಗೆ ಪೆನ್ ಮತ್ತು ಪೇಪರ್ ವಿಧಾನದಲ್ಲಿ ನಡೆಸಲಾಗುವುದು.  ಪರೀಕ್ಷಾ ನಗರ ಮಾಹಿತಿ ಚೀಟಿಯು ಪ್ರವೇಶ ಪತ್ರವಲ್ಲ. ಇದನ್ನು ಅಭ್ಯರ್ಥಿಗಳಿಗೆ ಅವರ ಪರೀಕ್ಷಾ ಕೇಂದ್ರ ಇರುವ ನಗರದ ಬಗ್ಗೆ ತಿಳಿಸಲು ಮಾತ್ರ ನೀಡಲಾಗುತ್ತಿದೆ ಎಂದು ಎನ್‌ಟಿಎ ಸ್ಪಷ್ಟಪಡಿಸಿದೆ. ಪರೀಕ್ಷೆ ಮತ್ತು ಪ್ರವೇಶ ಪತ್ರಕ್ಕೆ ಸಂಬಂಧಿಸಿದ ಇತ್ತೀಚಿನ ಪ್ರಕಟಣೆಗಳಿಗಾಗಿ ತನ್ನ ಅಧಿಕೃತ ಜಾಲತಾಣಗಳ ಮೂಲಕ ತಿಳಿದುಕೊಳ್ಳುವಂತೆ ಸಂಸ್ಥೆಯು ಅಭ್ಯರ್ಥಿಗಳಿಗೆ ಸೂಚಿಸಿದೆ.

<><><><>

ರಾಜ್ಯಸಭಾ ಚುನಾವಣೆಗೆ ಬಿಜೆಪಿ ಮತ್ತೊಂದು ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದೆ. ಪಕ್ಷವು ಮಧ್ಯಪ್ರದೇಶದಿಂದ ಮಹೇಶ್ ಕೆವಾತ್ ಮತ್ತು ಕರ್ನಾಟಕದಿಂದ ಡಾ.ಎಂ.ನಾಗರಾಜ ಅವರನ್ನು ಕಣಕ್ಕಿಳಿಸಿದೆ.

ಕರ್ನಾಟಕದಲ್ಲಿ ವಿಧಾನ ಪರಿಷತ್ತಿನ ಚುನಾವಣೆಗೆ ಲಿಂಗರಾಜ್ ಪಾಟೀಲ್ ಮತ್ತು ರಘು ಕೌಟಿಲ್ಯ ಅವರನ್ನು ಅಭ್ಯರ್ಥಿಗಳೆಂದು ಪಕ್ಷ ಘೋಷಿಸಿದೆ.

<><><><>

ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ 'ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್ ಮತ್ತು ಸಬ್ಕಾ ಪ್ರಯಾಸ್' ತತ್ವಗಳಿಂದ ಭಾರತವು ಗಮನಾರ್ಹ ಪರಿವರ್ತನೆಗೆ ಒಳಗಾಗಿದೆ.

ಈ ಅವಧಿಯಲ್ಲಿ, ಸರ್ಕಾರವು ಬಡವರು, ರೈತರು, ಮಹಿಳೆಯರು ಮತ್ತು ಯುವಕರ ಕಲ್ಯಾಣ ಮತ್ತು ಸಬಲೀಕರಣಕ್ಕಾಗಿ ಅನೇಕ ಪ್ರಮುಖ ಉಪಕ್ರಮಗಳನ್ನು ನಡೆಸಿದೆ. ಕಳೆದ ಹನ್ನೆರಡು ವರ್ಷಗಳಲ್ಲಿ ಕೈಗೊಂಡ ದೃಢ ನೀತಿಗಳಿಂದಾಗಿ ಭಾರತವು ಪರಿಸರ ಮತ್ತು ಹವಾಮಾನ ಸಂರಕ್ಷಣೆಯಲ್ಲಿ ಮಹತ್ವದ ಪರಿವರ್ತನೆ ಸಾಧಿಸಿದೆ. ೨೦೧೪ರ 'ನಮಾಮಿ ಗಂಗೆ' ಯೋಜನೆಯಡಿ ೩೫೫ ಕಾಮಗಾರಿಗಳು ಪೂರ್ಣಗೊಂಡಿದ್ದು, ಗಂಗಾ ನದಿಯ ಸ್ವಚ್ಛತೆಯಲ್ಲಿ ಪ್ರಗತಿ ಕಂಡುಬಂದಿದೆ. ಇನ್ನು 'ಗ್ರೀನ್ ಇಂಡಿಯಾ ಮಿಷನ್' ಪ್ರಯತ್ನಗಳಿಂದ ಜಾಗತಿಕ ಅರಣ್ಯ ಪ್ರದೇಶದ ಪಟ್ಟಿಯಲ್ಲಿ ಭಾರತ ೯ನೇ ಸ್ಥಾನಕ್ಕೇರಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಚಾಲನೆ ನೀಡಿದ 'ಏಕ್ ಪೇಡ್ ಮಾ ಕೆ ನಾಮ್' ಅಭಿಯಾನದಡಿ ದಾಖಲೆಯ ೨೬೨ ಕೋಟಿಗೂ ಹೆಚ್ಚು ಸಸಿಗಳನ್ನು ನೆಡಲಾಗಿದೆ.

<><><><>

ಏಪ್ರಿಲ್ ೮ರ ಕದನ ವಿರಾಮದ ನಂತರ ಇರಾನ್ ಮೊದಲ ಬಾರಿಗೆ ಇಸ್ರೇಲ್ ಮೇಲೆ ಕ್ಷಿಪಣಿ ದಾಳಿ ನಡೆಸಿದೆ ಎಂದು ಇಸ್ರೇಲ್ ರಕ್ಷಣಾ ಪಡೆ ತಿಳಿಸಿದೆ. ಇರಾನ್‌ನ ಸರ್ಕಾರಿ ಸ್ವಾಮ್ಯದ ಸುದ್ದಿ ಸಂಸ್ಥೆಯೂ ಈ ದಾಳಿಯನ್ನು ದೃಢಪಡಿಸಿದೆ. ಇರಾನ್ ದಾಳಿಯ ಬೆನ್ನಲ್ಲೇ ಪ್ರತಿಕ್ರಿಯೆ ನೀಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರೊಂದಿಗೆ ಮಾತನಾಡಿ ಯಾವುದೇ ರೀತಿಯ ಪ್ರತೀಕಾರದ ಜಂಟಿ ದಾಳಿ ನಡೆಸದಂತೆ ಸೂಚಿಸುವುದಾಗಿ ತಿಳಿಸಿದ್ದಾರೆ. ಇರಾನ್ ಕ್ಷಿಪಣಿ ದಾಳಿಯನ್ನು ತಕ್ಷಣ ನಿಲ್ಲಿಸಿ ಮತ್ತೆ ಶಾಂತಿ ಮಾತುಕತೆಗೆ ಮರಳಬೇಕು ಎಂಬುದು ತಮ್ಮ ಆಶಯವಾಗಿದೆ ಎಂದು ಅಧ್ಯಕ್ಷ ಟ್ರಂಪ್ ಹೇಳಿದ್ದಾರೆ. ಇದೇ ವೇಳೆ, ಇಸ್ರೇಲ್ ಈ ಹಿಂದೆ ನಡೆಸಿದ್ದ ದಾಳಿಗಳು ವಾಷಿಂಗ್ಟನ್ ಜೊತೆಗಿನ ಸಮನ್ವಯತೆಯಿಂದ ಕೂಡಿರಲಿಲ್ಲ ಮತ್ತು ಈ ಬಗ್ಗೆ ತಮಗೆ ಅಸಮಾಧಾನವಿದೆ ಎಂದೂ ಅವರು ಸ್ಪಷ್ಟಪಡಿಸಿದ್ದಾರೆ.

<><><><>

ಮಂಗೋಲಿಯಾದಲ್ಲಿ ನಡೆದ ಉಲಾನ್‌ಬಾತರ್ ಓಪನ್-೨೦೨೬ ಕುಸ್ತಿ ಪಂದ್ಯಾವಳಿಯಲ್ಲಿ ಭಾರತೀಯ ಕುಸ್ತಿಪಟುಗಳು ಉತ್ತಮ ಪ್ರದರ್ಶನ ನೀಡಿದ್ದು, ಅಂತಿಮ ದಿನವಾದ ನಿನ್ನೆ ಎರಡು ಚಿನ್ನದ ಪದಕಗಳನ್ನು ಮುಡಿಗೇರಿಸಿಕೊಂಡು ತಮ್ಮ ಅಭಿಯಾನವನ್ನು ಸಂಪನ್ನಗೊಳಿಸಿದ್ದಾರೆ.

ಇದರೊಂದಿಗೆ ಭಾರತ ೮ ಚಿನ್ನ ಸೇರಿದಂತೆ ಒಟ್ಟು ೧೬ ಪದಕಗಳನ್ನು ಜಯಿಸಿ ಉತ್ತಮ ಸಾಧನೆ ಮಾಡಿದೆ.

<><><><>

ಪ್ಯಾರಿಸ್‌ನಲ್ಲಿ ನಡೆದ ಫ್ರೆಂಚ್ ಓಪನ್ ಗ್ರ್ಯಾಂಡ್ ಸ್ಲ್ಯಾಮ್ ಟೂರ್ನಿಯ ಪುರುಷರ ವಿಭಾಗದ ಫೈನಲ್‌ನಲ್ಲಿ ಇಟಲಿಯ ಫ್ಲಾವಿಯೋ ಕೊಬೊಲ್ಲಿ ವಿರುದ್ಧ ಜಯ ಸಾಧಿಸಿ ಜರ್ಮನಿಯ ಅಲೆಕ್ಸಾಂಡರ್ ಜ್ವೆರೇವ್ ತಮ್ಮ ಚೊಚ್ಚಲ ಗ್ರ್ಯಾಂಡ್ ಸ್ಲ್ಯಾಮ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ನಿನ್ನೆ ನಡೆದ ಫೈನಲ್‌ನಲ್ಲಿ ಜ್ವೆರೇವ್ ೪ ಗಂಟೆ ೨೦ ನಿಮಿಷ ನಡೆದ ಹಣಾಹಣಿಯಲ್ಲಿ ೬-೧, ೪-೬, ೬-೪, ೬-೭, ೬-೧ ಸೆಟ್‌ಗಳಿಂದ ಜಯ ದಾಖಲಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>